**ದಿನಾಂಕ: 07.05.2022 ರಂದು 11-30 ಕ್ಕೆ ಶ್ರೀಮತಿ ಅನುಷಾ .ಎ.ಎಂ., ನೋಡಲ್ ಅಧಿಕಾರಿಗಳ ಅಧ್ಯಕ್ಷತೆಯಲ್ಲಿ ವಾರ್ಡ್-177 (ಜೆ.ಪಿ.ನಗರ) ನಡೆದ ಸಭೆಯ ನಡಾವಳಿಗಳು:**

## : ಚರ್ಚೆಯಾದ ವಿಷಯಗಳು :

1. ವಾರ್ಡ್-177ರಲ್ಲಿನ ಸಾರ್ವಜನಿಕರ ಎಲ್ಲಾ ರೀತಿಯ ಕುಂದುಕೊರತೆಗಳ ಬಗ್ಗೆ ಅಭಿವೃದ್ಧಿ ಕಾಮಗಾರಿಗಳು ಹಾಗೂ ಘನತ್ಯಾಜ್ಯ ನಿರ್ವಹಣೆ ಮತ್ತು ಕೊವಿಡ್-19ರ ಬಗ್ಗೆ ಚರ್ಚಿಸುವ ಕುರಿತು.
2. ಅಧ್ಯಕ್ಷರ ಅಪ್ಪಣೆಯ ಮೇರೆಗೆ ಚರ್ಚಿಸುವಂತಹ ಇತರೆ ವಿಷಯಗಳು.

### : ಸಭೆಗೆ ಹಾಜರಾಗಿದ್ದವರ ವಿವರಗಳು :

| | |
|---|---|
| ಅಧ್ಯಕ್ಷರು | ನೋಡಲ್ ಅಧಿಕಾರಿ |
| ಸದಸ್ಯ ಕಾರ್ಯದರ್ಶಿ | ವಾರ್ಡ್ 177ರ ಸಹಾಯಕ ಅಭಿಯಂತರರು |
| ಸದಸ್ಯರುಗಳು | ಹಿರಿಯ /ಕಿರಿಯ ಆರೋಗ್ಯ ಪರಿವೀಕ್ಷಕರು |
| ಸದಸ್ಯರುಗಳು | ಜೆ.ಪಿ.ನಗರ ಸಹಾಯಕ ಕಂದಾಯ ಅಧಿಕಾರಿಗಳು |
| ಸದಸ್ಯರುಗಳು | ತೋಟಗಾರಿಕೆ ಅಧಿಕಾರಿ (Horti. Inspector) |
| ಸದಸ್ಯರುಗಳು | ಠಾಣಾಧಿಕಾರಿಗಳು, ನ್ಯಾಯ ಮತ್ತು ಸುವ್ಯವಸ್ಥೆ ಹಾಗೂ ಸಂಚಾರಿ |
| ಸದಸ್ಯರುಗಳು | ಕಂದಾಯ ಪರಿವೀಕ್ಷಕರು, ವಾರ್ಡ್ 177 |
| ಸದಸ್ಯರುಗಳು | ಅರಣ್ಯ ಸಂರಕ್ಷಣಾಧಿಕಾರಿಗಳು |
| ಸದಸ್ಯರುಗಳು | ಟ್ರಾಫಿಕ್ ಇಲಾಖೆಯ ಅಧಿಕಾರಿಗಳು |
| ಸದಸ್ಯರುಗಳು | ಮೇಜರ್ ರೋಡ್ ಇಲಾಖೆ ಅಧಿಕಾರಿಗಳು |

## :ನಡಾವಳಿಯ ವರದಿ:

- ಅಧ್ಯಕ್ಷರು ಮಾತನಾಡುತ್ತಾ ಹಿಂದಿನ ಸಭೆಯಲ್ಲಿ ಚರ್ಚೆಯಾದ ವಿಷಯಗಳ ಬಗ್ಗೆ ಅಧಿಕಾರಿಗಳು ಕೈಗೊಂಡ ಕ್ರಮಗಳ ಬಗ್ಗೆ ಚರ್ಚಿಸಲಾಯಿತು.

**ಸದರಿ ಸಭೆಯಲ್ಲಿ ಕಸ ವಿಲೇವಾರಿ ಸಮಸ್ಯೆ ಹಾಗೂ ಇತರೇ ದೂರುಗಳ ಬಗ್ಗೆ ಕುರಿತು ಈ ಕೆಳಕಂಡಂತೆ ಪ್ರಸ್ತಾಪಿಸಲಾಯಿತು.**

- 1ನೇ ಮುಖ್ಯರಸ್ತೆ, ಜೆ.ಪಿ.ನಗರ 3ನೇ ಹಂತ Casa Ansal ಹತ್ತಿರವಿರುವ ಕಬ್ಬಿನ ಅಂಗಡಿಯನ್ನು ತೆರವುಗೊಳಿಸುವಂತೆ ಸಭೆಯಲ್ಲಿ ಚರ್ಚಿಸಲಾಯಿತು.
- 1ನೇ ಮುಖ್ಯರಸ್ತೆ, ಜೆ.ಪಿ.ನಗರ 3ನೇ ಹಂತದ ರಸ್ತೆ ಬದಿಯಲ್ಲಿ ಅನಧಿಕೃತವಾಗಿ ಭಾರಿ ವಾಹನಗಳನ್ನು ನಿಲುಗಡೆ ಮಾಡುತ್ತಿರುವುದರಿಂದ ಇದರಿಂದಾಗಿ ವಾಹನ ಸಂಚಾರಕ್ಕೆ ಅಡಚಣೆ ಉಂಟಾಗುತ್ತಿರುವುದರಿಂದ ಸಂಬಂಧಪಟ್ಟ ಅಧಿಕಾರಿಗಳು ತೆರವುಗೊಳಿಸುವಂತೆ ಚರ್ಚಿಸಲಾಯಿತು. **ಕ್ರಮ :- ಜಯನಗರ ಸಂಚಾರಿ ವಿಭಾಗ**
- ವಾರ್ಡ್ 177 ವ್ಯಾಪ್ತಿಯಲ್ಲಿನ ಪ್ರತಿನಿತ್ಯ ಪೌರಕಾರ್ಮಿಕರು ಕಸ ವಿಲೇವಾರಿಯನ್ನು ಸಮರ್ಪಕವಾಗಿ ನಿರ್ವಹಿಸುವಂತೆ ಚರ್ಚಿಸಲಾಯಿತು. **ಕ್ರಮ:- ಎಸ್‌ಡಬ್ಲ್ಯೂಎಂ**

**ಪು.ತಿ.ನೋ**

- ವಾರ್ಡ್ 177ರ ವ್ಯಾಪ್ತಿಯಲ್ಲಿ ಪ್ರತಿದಿನ ಬ್ಲಾಕ್ ಸ್ಪಾಟ್‌ಗಳಲ್ಲಿ ಹಾಕುತ್ತಿರುವ ಕಸವನ್ನು ತೆರವುಗೊಳಿಸುವಂತೆ ಮಾರ್ಷಲ್‌ರವರನ್ನು ನಿಯೋಜಿಸುವಂತೆ ಚರ್ಚಿಸಲಾಯಿತು.
  **ಕ್ರಮ:- ಎಸ್‌ಡಬ್ಲ್ಯೂಎಂ**

- 9ನೇ ಅಡ್ಡರಸ್ತೆಯಲ್ಲಿರುವ ಫುಟ್‌ಪಾತ್ ದುರಸ್ಥಿಗೊಂಡಿದ್ದು, ಅದನ್ನು ಸರಿಪಡಿಸುವಂತೆ ಸಭೆಯಲ್ಲಿ ಚರ್ಚಿಸಲಾಯಿತು. **ಕ್ರಮ :- ಮೇಜರ್ ರೋಡ್**

- ಡಾಲರ್ಸ್ ಕಾಲೋನಿಯ ಉದ್ಯಾನವನದಲ್ಲಿ ಬೀದಿ ದೀಪಗಳು ದುರಸ್ಥಿಗೊಂಡಿದ್ದು, ಅದನ್ನು ಸರಿಪಡಿಸುವಂತೆ ಸಭೆಯಲ್ಲಿ ಚರ್ಚಿಸಲಾಯಿತು. **ಕ್ರಮ:- ಸ.ಕಾ.ನಿ.ಅ., ಬೀದಿ ದೀಪ ನಿರ್ವಹಣೆ ಉಪವಿಭಾಗ**

- ಡಾಲರ್ಸ್ ಕಾಲೋನಿಯಲ್ಲಿ ಸೊಳ್ಳೆ ನಿಯಂತ್ರಣ ಔಷಧಿ ಸಿಂಪಡಣೆಯನ್ನು ಮಾಡುವಂತೆ ಫಾಗಿಂಗ್ ಬಗ್ಗೆ ಚರ್ಚಿಸಲಾಯಿತು. **ಕ್ರಮ:- ಆರೋಗ್ಯ ಇಲಾಖೆ, ಜೆ.ಪಿ.ನಗರ ಉಪವಿಭಾಗ**

- ವಾರ್ಡ್ ವ್ಯಾಪ್ತಿಯಲ್ಲಿ ನೇತಾಡುತ್ತಿರುವ ಕೇಬಲ್ ವೈರ್‌ಗಳನ್ನು ತೆರವುಗೊಳಿಸುವಂತೆ ಚರ್ಚಿಸಲಾಯಿತು. **ಕ್ರಮ :- ಸಹಾಯಕ ಅಭಿಯಂತರರು, ಜೆ.ಪಿ.ನಗರ ಉಪವಿಭಾಗ**

- ಕೊನೆಯದಾಗಿ ಮಾನ್ಯ ಅಧ್ಯಕ್ಷರು ಸಭೆಗೆ ಹಾಜರಾದ ಎಲ್ಲಾ ಸದಸ್ಯರು ಮತ್ತು ಸಾರ್ವಜನಿಕರಿಗೆ ವಂದನೆಯನ್ನು ತಿಳಿಸುತ್ತಾ ಇನ್ನು ಮುಂದೆ ಪ್ರತಿ ತಿಂಗಳು ಮೊದಲ ಶನಿವಾರ ಹಾಗೂ ಮೂರನೇ ಶನಿವಾರ ಬೆಳಿಗ್ಗೆ 11.00 ಘಂಟೆಗೆ ಇದೇ ರೀತಿಯಾಗಿ ಮಾಸಿಕ 2 ಬಾರಿ ವಾರ್ಡ್ ಸಮಿತಿ ಸಭೆ ನಡೆಯುವುದಾಗಿ ತಿಳಿಸಿ ಮುಂದಿನ ಸಭೆಗಳಿಗೆ ಈ ವಾರ್ಡಿನ ವ್ಯಾಪ್ತಿಗೆ ಬರುವ ಎಲ್ಲಾ ಇಲಾಖೆಗಳ ಅಧಿಕಾರಿಗಳನ್ನು ಸದರಿ ಸಭೆಗೆ ಮಾಹಿತಿಗಳೊಂದಿಗೆ ಸಕಾಲದಲ್ಲಿ ಹಾಜರಾಗುವಂತೆ ಹಾಗೂ ಈ ಸಭೆಯಲ್ಲಿ ತಿಳಿಸಿರುವ ಸಮಸ್ಯೆಗಳನ್ನು ಬಗೆಹರಿಸಲು ಕೋರಿ ಪತ್ರ ಬರೆಯಲು ಸದಸ್ಯ ಕಾರ್ಯದರ್ಶಿ ರವರಿಗೆ ಸೂಚಿಸಿದರು.

- ಸದಸ್ಯ ಕಾರ್ಯದರ್ಶಿ ಹಾಗೂ ಸಹಾಯಕ ಅಭಿಯಂತರವರು ಸಭೆಗೆ ಹಾಜರಾದ ಎಲ್ಲಾ ಸದಸ್ಯರಿಗೂ ಹಾಗೂ ಅಧಿಕಾರಿಗಳು/ನೌಕರರಿಗೂ ವಂದನಾರ್ಪಣೆ ಸಲ್ಲಿಸುವುದರೊಂದಿಗೆ ಸಭೆಯನ್ನು ಮುಕ್ತಾಯಗೊಳಿಸಲಾಯಿತು.

07/05/22

**ಸದಸ್ಯ ಕಾರ್ಯದರ್ಶಿ**
**ಹಾಗೂ ಸಹಾಯಕ ಅಭಿಯಂತರರು**
**ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ.**